## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಕ್ಕಳ ಸ್ನೇಹಿ ಗ್ರಾಮ ಪಂಚಾಯತ್ ಪ್ರಶಸ್ತಿ-2019ರ ಅಡಿಯಲ್ಲಿ ಆಯ್ಕೆಗೊಂಡಿರುವ ರಾಜಾನುಕುಂಟೆ ಗ್ರಾಮ ಪಂಚಾಯತಿಗೆ ಘೋಷಣೆಯಾಗಿರುವ ಪ್ರೋತ್ಸಾಹಕ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

ಸರ್ಕಾರದ ಅಧೀನ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ(ಪುರಸ್ಕಾರ ವಿಭಾಗ), ಭಾರತ ಸರ್ಕಾರದ ಆದೇಶ ಪತ್ರ ಸಂಖ್ಯೆ :N-11019/6/2019-Governance(i), ದಿನಾಂಕ:25-11-2019.

ಪ್ರಸ್ತಾವನೆ:

ಮೇಲೆ ಓದಲಾದ ಭಾರತ ಸರ್ಕಾರದ ಬಿಡುಗಡೆ ಆದೇಶ ಪತ್ರದ ಮೂಲಕ ರಾಜ್ಯದ "ಮಕ್ಕಳ ಸ್ನೇಹಿ ಗ್ರಾಮ ಪಂಚಾಯತ್"ಪ್ರಶಸ್ತಿಯನ್ನು ಘೋಷಣೆ ಮಾಡಲಾಗಿದೆ. ಅದರಂತೆ, ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ಉತ್ತರ ತಾಲ್ಲೂಕಿನ ರಾಜಾನುಕುಂಟೆ ಗ್ರಾಮ ಪಂಚಾಯತಿಯು ಭಾರತ ಸರ್ಕಾರದ 'ಮಕ್ಕಳ ಸ್ನೇಹಿ ಗ್ರಾಮ ಪಂಚಾಯತ್ ಪ್ರಶಸ್ತಿ'ಗೆ ಭಾಜನವಾಗಿದೆ. ಈ ಗ್ರಾಮ ಪಂಚಾಯತಿಗೆ ರೂ.5.00ಲಕ್ಷಗಳ (ಐದು ಲಕ್ಷ ರೂಪಾಯಿಗಳು ಮಾತ್ರ) ನಗದು ಬಹುಮಾನವನ್ನು ಘೋಷಿಸಲಾಗಿದೆ. ಘೋಷಿಸಲಾದ ನಗದು ಬಹುಮಾನವನ್ನು ಈ ಗ್ರಾಮ ಪಂಚಾಯತಿಗೆ ವಿತರಿಸುವ ಕುರಿತು ಸರ್ಕಾರದ ಆದೇಶವನ್ನು ಹೊರಡಿಸಬೇಕಾಗಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 07 ಜಿಪಸ 2020, ದಿನಾಂಕ:16-01-2020

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಕರ್ನಾಟಕ ರಾಜ್ಯದ ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ಉತ್ತರ ತಾಲ್ಲೂಕಿನ ರಾಜಾನುಕುಂಟೆ ಗ್ರಾಮ ಪಂಚಾಯತಿಗೆ ನಗದು ಬಹುಮಾನ ಮೊತ್ತವಾಗಿ ರೂ.5.00(ಐದು ಲಕ್ಷ ರೂಪಾಯಿಗಳು ಮಾತ್ರ) ಲಕ್ಷಗಳನ್ನು 2017-18ನೇ ಸಾಲಿನ ಪ್ರಗತಿಯನ್ನು ಆಧರಿಸಿ 2019ನೇ ಸಾಲಿನಲ್ಲಿ ಭಾರತ ಸರ್ಕಾರದ "ಮಕ್ಕಳ ಸ್ನೇಹಿ ಗ್ರಾಮ ಪಂಚಾಯತ್ ಪ್ರಶಸ್ತಿ"ಗೆ ಘೋಷಣೆಯಾಗಿರುವ ಪ್ರೋತ್ಸಾಹಕ ಅನುದಾನವನ್ನು ವಿತರಿಸಲು ಆದೇಶಿಸಿದೆ.

ರಾಜೀವ್ ಗಾಂಧಿ ಪಂಚಾಯತಿ ಸಶಕ್ತಿಕರಣ ಅಭಿಯಾನ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ರಾಜ್ಯ ಸರ್ಕಾರದ ವತಿಯಿಂದ ಬ್ಯಾಂಕ್ ಆಫ್ ಬರೋಡಾ, ಇಂದಿರಾನಗರ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 05211002648ಯಿಂದ ಪ್ರಶಸ್ತಿಯನ್ನು ಪಡೆದ ಈ ಕೆಳಕಂಡ ಗ್ರಾಮ ಪಂಚಾಯತಿಗೆ ನಗದು ಬಹುಮಾನವನ್ನು ಅದರ ವರ್ಗ-1ರ ಅನುದಾನಕ್ಕಾಗಿ ತೆರೆದಿರುವ ಬ್ಯಾಂಕ್‌ನ ಉಳಿತಾಯ ಖಾತೆಗೆ ವರ್ಗಾಯಿಸಲು ಆದೇಶಿಸಿದೆ. ಈ ಅನುದಾನವನ್ನು ಮಕ್ಕಳ ಸ್ನೇಹಿ ಗ್ರಾಮ ಪಂಚಾಯತ್ ಪ್ರಶಸ್ತಿಯಡಿ ಪ್ರತ್ಯೇಕವಾಗಿ ಖಾತೆಯನ್ನು ತೆರೆದು, ಆ ಖಾತೆಯ ಮುಖಾಂತರ ಈ ಯೋಜನೆಯ ಅನುದಾನದ ವ್ಯವಹಾರವನ್ನು ನಡೆಸತಕ್ಕದ್ದು.

| ಕ್ರ. ಸಂ. | ಪ್ರಶಸ್ತಿಯನ್ನು ಗಳಿಸಿರುವ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆ | ಘೋಷಣೆ ಮಾಡಲಾದಂತೆ ವಿತರಿಸಲಾಗುತ್ತಿರುವ ನಗದು ಬಹುಮಾನ (ರೂ. ಲಕ್ಷಗಳಲ್ಲಿ) | ವರ್ಗ-1ರ ಉಳಿತಾಯ ಖಾತೆ ಸಂಖ್ಯೆ | ಬ್ಯಾಂಕ್‌ನ ಹೆಸರು ಮತ್ತು ಶಾಖೆ | ಐ.ಎಫ್.ಎಸ್.ಸಿ. ಕೋಡ್ |
|---|---|---|---|---|---|
| 1 | ರಾಜಾನುಕುಂಟೆಗ್ರಾಮ ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ. | 5.00 | 520101029322401 | ಕಾರ್ಪೋರೇಶನ್ ಬ್ಯಾಂಕ್, ರಾಜಾನುಕುಂಟೆ ಶಾಖೆ. | CORP0001181 |

ಈ ಆದೇಶದ ಮೂಲಕ ಬಿಡುಗಡೆಗೊಳಿಸಲಾದ ಬಹುಮಾನದ ಮೊತ್ತವನ್ನು ಬಳಸಲು ಈ ಕೆಳಕಂಡ ಮಾರ್ಗಸೂಚಿಗಳ ಅನುಸಾರ ಮಾತ್ರವೇ ಕ್ರಮವಹಿಸತಕ್ಕದ್ದು.

1. ಕಾಮಗಾರಿಗಳ ಅನುಷ್ಠಾನವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999/2000 ಹಾಗೂ ಇದಕ್ಕೆ ಕಾಲಕಾಲಕ್ಕೆ ಮಾಡಲಾದ ಎಲ್ಲಾ ತಿದ್ದುಪಡಿಗಳ ಅನುಸಾರ ನೆರವೇರಿಸತಕ್ಕದ್ದು.
2. ಕ್ರಿಯಾ ಯೋಜನೆಯನ್ನು ತಯಾರಿಸುವಾಗ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿರುವ ಕ್ಷೇತ್ರಗಳಾದ ಆರೋಗ್ಯ ಮತ್ತು ಪೌಷ್ಠಿಕಾಂಶ, ಶಿಕ್ಷಣ, ನೈರ್ಮಲ್ಯ ಹಾಗೂ ಶಿಶು ಕೇಂದ್ರಿತ ಸೌಲಭ್ಯಗಳನ್ನು ವೃದ್ಧಿಸುವಂತಹ ಜೀವನೋಪಾಯದ ಬೆಂಬಲ, ಆಸ್ತಿ ಸೃಜನೆ, ನಾಗರೀಕ ಮೂಲಭೂತ ಸೌಲಭ್ಯಗಳ ಸೃಷ್ಠಿ ಹಾಗೂ ನಿರ್ವಹಣೆಗಾಗಿ ಅನುದಾನವನ್ನು ಬಳಸಲು ಸಂಬಂಧಿಸಿದ ಚಟುವಟಿಕೆಗಳನ್ನು ಸೇರ್ಪಡೆಗೊಳಿಸಿಕೊಳ್ಳಬಹುದು.
3. ಗ್ರಾಮ ಪಂಚಾಯತಿಗೆ ಬಿಡುಗಡೆಗೊಳಿಸಿರುವ ಮೊತ್ತದಲ್ಲಿ ಶಾಶ್ವತ ಆಸ್ತಿ ಸೃಜನೆಯಾಗುವಂತಹ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಬಹುದು. ಈ ಆಸ್ತಿಗಳ ಸೃಜನೆಯಿಂದಾಗಿ ಗ್ರಾಮ ಪಂಚಾಯತಿಗೆ ನಿಗಧಿತ ಆದಾಯ ಬರುವಂತಹ ಕಾಮಗಾರಿಗಳಿಗೆ ಹೆಚ್ಚು ಆದ್ಯತೆ ನೀಡಬಹುದು.
4. ಗ್ರಾಮ ಪಂಚಾಯತಿಗೆ ಬಿಡುಗಡೆಗೊಳಿಸಿದ ಅನುದಾನವು "ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ"ಯ ರಾಷ್ಟ್ರೀಯ ಪುರಸ್ಕಾರದ ವಿಶೇಷ ಉದ್ದೇಶಗಳನ್ನು ಈಡೇರಿಸಲು ಬಳಸಿಕೊಳ್ಳುವುದು. ಮಕ್ಕಳ ಸಭೆಗಳನ್ನು ಆಯೋಜಿಸುವುದು.
5. ಕಾಮಗಾರಿಗಳ ಅನುಷ್ಠಾನದಲ್ಲಿ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳುವುದು.
6. ನಗದು ಬಹುಮಾನವನ್ನು ಬಾಕಿ ಉಳಿಸದೇ ಬಿಡುಗಡೆಗೊಳಿಸಿದ ಪೂರ್ಣ ಮೊತ್ತಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಅನುಷ್ಠಾನಗೊಳಿಸತಕ್ಕದ್ದು. ಈ ಕ್ರಿಯಾಯೋಜನೆಯು ಆಯಾ ಗ್ರಾಮ ಪಂಚಾಯತಿಯ ಆಯವ್ಯಯ ಮತ್ತು ಅಭಿವೃದ್ಧಿ ಯೋಜನೆಯ ಭಾಗವಾಗಿರಬೇಕು.
7. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳನ್ನು ರೂಪಿಸಿದ ನಂತರ ಯೋಜನೆಗಳಲ್ಲಿ ಕಂಡುಬರುವ ಅಂತರಗಳನ್ನು ಕಡಿಮೆ ಮಾಡಲು ಬಳಸುವುದು.
8. ನಗದು ಬಹುಮಾನದ ಶೇಖಡ 25ರಷ್ಟನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವರ್ಗಗಳ ಕಲ್ಯಾಣಕ್ಕೆ ವಿನಿಯೋಗಿಸತಕ್ಕದ್ದು ಹಾಗೆಯೇ ಶೇಕಡ 5ರಷ್ಟನ್ನು ವಿಕಲಚೇತನರಿಗೆ ವಿನಿಯೋಗಿಸುವುದು.
9. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ (3) ಹಾಗೂ 3(ಎ) ಪ್ರಕಾರ ವಾರ್ಡ್ ಸಭೆ ಹಾಗೂ ಗ್ರಾಮ ಸಭೆ ಶಿಫಾರಸ್ಸುಗಳನ್ನು ಆದ್ಯತೆಗನುಸಾರ ಗ್ರಾಮ ಪಂಚಾಯತಿ ಸಭೆಯಲ್ಲಿ ಅಭಿವೃದ್ಧಿ ಯೋಜನೆಯ ಅನುಮೋದನೆ ಪಡೆಯುವುದನ್ನು ಕಡ್ಡಾಯಗೊಳಿಸಿದೆ.
10. ಪ್ರಗತಿ ವರದಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು ಹಾಗೂ ಹಣ ಬಳಕೆ ನಮೂನೆ ಪತ್ರ (GFR 12–C [(See Rule 239)]) ವನ್ನು ಸರ್ಕಾರಕ್ಕೆ ಸಲ್ಲಿಸುವುದು (ಪ್ರತಿಯನ್ನು ಲಗತ್ತಿಸಿದೆ).

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16.01.2020
(ಸಿ.ಮಂಜುಳಾ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

16.01.2020

ಇವರಿಗೆ:

1. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ.
5. ವಿಶೇಷಾಧಿಕಾರಿ, ಜಿಲ್ಲಾ ಪಂಚಾಯತಿ, ಆರ್ಥಿಕ ಇಲಾಖೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಂಗಳೂರು ಉತ್ತರ, ಬೆಂಗಳೂರು ನಗರ ಜಿಲ್ಲೆ.
8. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಾಜಾನುಕುಂಟೆ ಗ್ರಾಮ ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.